KARNATAKA LEGISLATIVE ASSEMBLY, RESEARCH AND REFERENCE BRANCH

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

ಪತ್ರಿಕಾ ತುಣುಕುಗಳು PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE :

# ಎಲ್ಲ ಸಿಬ್ಬಂದಿಯೂ ತಪ್ಪದೇ ಲಸಿಕೆ ಪಡೆಯಿರಿ

ಬೆಂಗಳೂರು: ಕೋವಿಡ್ ಲಸಿಕೆಯನ್ನು ಎಲ್ಲ ಸಿಬ್ಬಂದಿ ತಪ್ಪದೆ ಪಡೆಯಬೇಕು ಎಂದು ಆರೋಗ್ಯ ಸಚಿವ ಡಾ.ಕೆ. ಸುಧಾಕರ್ ಮನವಿ ಮಾಡಿದರು. ಲಸಿಕೆ 2ನೇ ಅಲೆ ಬಾರದಂತೆ ತಡೆಗಟ್ಟಲು ನೆರವಾಗಲಿದ್ದು, ಉದಾಸೀನ ಮಾಡಬಾರದು. ಎಲ್ಲ ಇಲಾಖೆಗಳ ಅಧಿಕಾರಿ, ಸಿಬ್ಬಂದಿ ಕೋವಿಡ್ ಲಸಿಕೆ ಪಡೆಯಬೇಕು. ಈ ಬಗ್ಗೆ ಸಿಎಂ ಕೂಡ ವೀಡಿಯೊ ಸಂವಾದ ನಡೆಸಿ ಸೂಚನೆ ನೀಡಲಿದ್ದಾರೆ ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.



ಲಸಿಕೆ ಪಡೆದ ಬಳಿಕ ಸೋಂಕಿನ ತೀವ್ರತೆ ಕಡಿಮೆಯಾಗುತ್ತದೆ. ಅದರಿಂದ ಸಾವು ಉಂಟಾಗುವುದಿಲ್ಲ. ಸಾರ್ವಜನಿಕರು ಇನ್ನು ಮುಂದೆಯೂ ಕೋವಿಡ್ ಸುರಕ್ಷತಾ ಕ್ರಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಮದುವೆ ಮೊದಲಾದ ಸಮಾರಂಭ, ಸಭೆಗಳು ಹೆಚ್ಚುತ್ತಿದೆ. ಇದಕ್ಕೆ ಕಡಿವಾಣ ಹಾಕಿಕೊಳ್ಳಬೇಕು ಎಂದರು. ಕೇರಳ ಮತ್ತು ಮಹಾರಾಷ್ಟದಿಂದ ಬರುವವರು ಕರೊನಾ ನೆಗೆಟಿವ್ ವರದಿ ಹೊಂದಿರಬೇಕು ಎಂದು ಸೂಚಿಸಲಾಗಿದೆ. ಆಯಾ ಜಿಲ್ಲಾಡಳಿತ, ಪೊಲೀಸ್ ಸಿಬ್ಬಂದಿ ನೆರವಿನಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ. ಮುಂದಿನ ದಿನಗಳಲ್ಲಿ ಎರಡನೇ ಅಲೆ ಬರುವುದನ್ನು ತಡೆಗಟ್ಟಲು ಸಫಲವಾದರೆ ಲಾಕ್‌ಡೌನ್ ಮೊದಲಾದ ಕ್ರಮಗಳ ಪ್ರಶ್ನೆಯೇ ಬರುವುದಿಲ್ಲ ಎಂದರು.

**ತಪಾಸಣೆ ಬಿಗಿಗೊಳಿಸಲು ಪತ್ರ:** ರಾಜ್ಯದ ಗಡಿಗೆ ಹೊಂದಿಕೊಂಡಿರುವ ಮಹಾರಾಷ್ಟ್ರ, ಗೋವಾ, ಕೇರಳದಲ್ಲಿ ಕರೊನಾ ಉಲ್ಬಣವಾಗುತ್ತಿದ್ದು, ಇದರಿಂದ ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆ ಕಾರ್ಯ ಕಟ್ಟುನಿಟ್ಟಾಗಿ ಪಾಲಿಸಲು ಸಂಬಂಧಪಟ್ಟವರಿಗೆ ಸೂಚನೆ ನೀಡಿ ಎಂದು ಸಚಿವ ಡಾ.ಕೆ.ಸುಧಾಕರ್ ಅವರಿಗೆ ಡಿಸಿಎಂ ಗೋವಿಂದ ಕಾರಜೋಳ ಪತ್ರ ಬರೆದು ಕೋರಿದ್ದಾರೆ.

**ನೆರೆರಾಜ್ಯಗಳಲ್ಲಿ ಕೋವಿಡ್ ಪ್ರಕರಣ ಮತ್ತೆ ಹೆಚ್ಚುತ್ತಿರುವ ಬಗ್ಗೆ ರಾಜ್ಯ ಪೂರ್ಣ ನಿಗಾವಹಿಸಿದ್ದು, ಪರಿಸ್ಥಿತಿಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ. ಮುಂಜಾಗ್ರತಾ ಕ್ರಮ ತೆಗೆದುಕೊಳ್ಳಲಾಗಿದೆ. ನಾಗರಿಕರು ಸುರಕ್ಷತಾ ಕ್ರಮಗಳನ್ನು ಕಡ್ಡಾಯ ಪಾಲಿಸಿ ಸಹಕರಿಸಬೇಕು.**

**| ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿ**

## ಇಂದ್ರಧನುಷ್ 3.0ಗೆ ನಾಳೆ ಚಾಲನೆ

ಮಕ್ಕಳು ಹಾಗೂ ಗರ್ಭಿಣಿಯರಿಗೆ ಏಳು ರೋಗಗಳು ಬಾರದಂತೆ ತಡೆಯಲು ಇಂದ್ರಧನುಷ್ ಲಸಿಕೆ ಅಭಿಯಾನ ನಡೆಸಲಾಗುತ್ತಿದೆ ಎಂದು ಡಾ.ಕೆ. ಸುಧಾಕರ್ ತಿಳಿಸಿದರು. 2 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಹಾಗೂ ಗರ್ಭಿಣಿಯರಿಗೆ 13 ಜಿಲ್ಲೆಗಳಲ್ಲಿ ಲಸಿಕೆ ನೀಡಲಾಗುವುದು. ಕೇಂದ್ರ ಸರ್ಕಾರ ಇಂದ್ರಧನುಷ್ 3.0 ಅಭಿಯಾನ ಅನುಷ್ಠಾನಗೊಳಿಸಿದ್ದು, ಫೆ.22ರಿಂದ ಮಾ.22ರವರೆಗೆ ಅಭಿಯಾನ ನಡೆಸಲಾಗುವುದು. ಈವರೆಗೆ ತಲುಪಲಾಗದ ಪ್ರದೇಶಗಳನ್ನು ಗುರಿಯಾಗಿಟ್ಟುಕೊಂಡು ಈ ಲಸಿಕೆ ನೀಡಲಾಗುತ್ತಿದೆ ಎಂದರು.